# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1469 |
| ಸದಸ್ಯರ ಹೆಸರು | : | ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 20.03.2025 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಿಲ್ಕ್ ಬೋರ್ಡ್‌ನಿಂದ ಎಲೆಕ್ಟ್ರಾನಿಕ್ ಸಿಟಿಯನ್ನು ಸಂಪರ್ಕಿಸುವ ಮೇಲು ರಸ್ತೆಯ ಪಿಲ್ಲರ್ ಸಂಖ್ಯೆ: 20 & 21 ರ ನಡುವಿನ ರಾಷ್ಟ್ರೀಯ ಹೆದ್ದಾರಿಯ 7ರ ನಡುವಿನ ರಸ್ತೆ ವಿಭಾಜಕಗಳನ್ನು ತೆರವುಗೊಳಿಸಿದ ಬಳಿಕ ಈ ಪ್ರದೇಶದಲ್ಲಿ ಆದ ಅಪಘಾತಗಳ ಸಂಖ್ಯೆ ಎಷ್ಟು; ಇದರಿಂದ ಪ್ರಾಣ ಹಾನಿ ಮತ್ತು ಶಾಶ್ವತ ಅಂಗವಿಕಲರಾದವರ ಸಂಖ್ಯೆ ಎಷ್ಟು; | ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ರಸ್ತೆ ವಿಭಜಕಗಳನ್ನು ತೆರವುಗೊಳಿಸಿದ ನಂತರ ಸಂಭವಿಸಿರುವ ಅಪಘಾತಗಳ ವಿವರ ಈ ಕೆಳಕಂಡಂತಿರುತ್ತದೆ:– <br> ಸಂಭವಿಸಿರುವ ಅಪಘಾತಗಳ ಸಂಖ್ಯೆ: 05 <br> ಮೃತರ ಸಂಖ್ಯೆ: 03 <br> ಶಾಶ್ವತ ಅಂಗವಿಕಲರಾದವರ ಸಂಖ್ಯೆ: – |
| ಆ) | ಖಾಸಗಿ ಬಿಲ್ಡರ್‌ಗಳು ನೀಡಿದ ಲಂಚದ ಆಸೆಗಾಗಿ ಜನಸಾಮಾನ್ಯರ ಪ್ರಾಣದೊಂದಿಗೆ ಚೆಲ್ಲಾಟವಾಡುತ್ತಿರುವ ಸಂಬಂಧಿಸಿದ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮಗಳೇನು: | ರಸ್ತೆ ಸುರಕ್ಷತಾ ಸಮಿತಿ ಸಭೆಯಲ್ಲಿ ಕೈಗೊಂಡ ನಿರ್ಣಯದಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ಈ ರಸ್ತೆ ವಿಭಜಕಗಳನ್ನು ತೆರವುಗೊಳಿಸಲಾಗಿರುತ್ತದೆ. ಆದ್ದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ. |
| ಇ) | ಈ ಪ್ರದೇಶದಲ್ಲಿ ಯಾವುದೇ ವ್ಯಕ್ತಿಯ ಪ್ರಾಣ ಹಾನಿಯಾದಲ್ಲಿ ಅದನ್ನು ಕೊಲೆ ಎಂಬುದಾಗಿ ಪರಿಗಣಿಸಿ ಈ ಅಧಿಕಾರಿಗಳ ಮೇಲೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲು ಕ್ರಮ ಕೈಗೊಳ್ಳಲಾಗುವುದೆ; ಈ ಬಗ್ಗೆ ಸರ್ಕಾರದ ನಿಲುವೇನು ; | ರಸ್ತೆ ವಿಭಜಕಗಳನ್ನು ತೆರವುಗೊಳಿಸಿದ ಬಳಿಕ ಸಾರ್ವಜನಿಕ ಸುಗಮ ಸಂಚಾರದ ಹಿತದೃಷ್ಟಿಯಿಂದ ಅಗತ್ಯ ಸಿಬ್ಬಂದಿಗಳನ್ನು ಕರ್ತವ್ಯಕ್ಕೆ ನಿಯೋಜಿಸಿ ಸೂಕ್ತ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿರುತ್ತದೆ. <br> ಈ ಪ್ರದೇಶದಲ್ಲಿ ಅಪಘಾತಗಳು ಸಂಭವಿಸಿದಲ್ಲಿ, ಕಾನೂನು ರೀತ್ಯಾ ಅಪಘಾತ ಪ್ರಕರಣಗಳನ್ನು ದಾಖಲಿಸಿ, ಕ್ರಮ ಕೈಗೊಳ್ಳಲಾಗುತ್ತಿರುತ್ತದೆ. |
| ಈ) | 20 & 21ರ ನಡುವಿನ ರಾಷ್ಟ್ರೀಯ ಹೆದ್ದಾರಿಯ 7ರ ನಡುವಿನ ರಸ್ತೆ ವಿಭಜಕಗಳನ್ನು ಪೊಲೀಸ್ ಇಲಾಖೆ ವತಿಯಿಂದ ತೆರವುಗೊಳಿಸಲಾಗಿರುವ ಕುರಿತು ಸರ್ಕಾರದ ನಿಲುವೇನು ? | ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ. |

ಹೆಚ್‌ಡಿ 136 ಎಸ್‌ಎಸ್‌ಟಿ 2025

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು